# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : 630 (754) |
| ಸದಸ್ಯರ ಹೆಸರು | : ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು ) |
| ಉತ್ತರಿಸಬೇಕಾದ ದಿನಾಂಕ | : 11.12.2023 |
| ಉತ್ತರಿಸಬೇಕಾದ ಸಚಿವರು | : ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ರಾಜ್ಯ ಸರ್ಕಾರ ಚಾಲ್ತಿಯಲ್ಲಿರುವ ರಾಷ್ಟ್ರೀಯ ಶಿಕ್ಷಣ ನೀತಿ -2020ನ್ನು ಬದಲಾಯಿಸಿ, ಹೊಸ ರಾಜ್ಯ ಶಿಕ್ಷಣ ಪದ್ಧತಿಯನ್ನು ಜಾರಿಗೊಳಿಸಲು ಒಂದು ತಜ್ಞರ ಸಮಿತಿಯನ್ನು ನೇಮಿಸಿರುವುದು ನಿಜವೇ; ಹಾಗಿದ್ದಲ್ಲಿ, ಈ ಬಗ್ಗೆ ಪೂರ್ಣ ವಿವರವುಳ್ಳ ಮಾಹಿತಿ ನೀಡುವುದು; | ಕರ್ನಾಟಕದಲ್ಲಿ ಶಾಲಾ ಮತ್ತು ಉನ್ನತ ಶಿಕ್ಷಣದಲ್ಲಿ ಪ್ರವೇಶಾತಿಯನ್ನು ಹೆಚ್ಚಿಸಲು ಶಿಕ್ಷಣ ಗುಣಮಟ್ಟವನ್ನು ಉತ್ತಮಪಡಿಸಿ, ಸುಧಾರಿತ ಗುಣಮಟ್ಟದ ಶಿಕ್ಷಣ ಲಭ್ಯತೆಯನ್ನು ಎಲ್ಲರಿಗೂ ನೀಡುವ ಮೂಲಕ ಶಿಕ್ಷಣವನ್ನು ವಿಸ್ತರಿಸಲು ವಿದ್ಯಾರ್ಥಿಗಳಿಗೆ ಪ್ರಜಾಸತ್ತಾತ್ಮಕ ಮೌಲ್ಯವನ್ನು ಎತ್ತಿಹಿಡಿಯುವ ವೈಜ್ಞಾನಿಕ ಅರಿವನ್ನು ಮೂಡಿಸಲು, ಕೌಶಲ್ಯ ಹಾಗೂ ವೃತ್ತಿ ತರಬೇತಿ ನೀಡುವ ಮೂಲಕ ವಿದ್ಯಾರ್ಥಿಗಳ ಉದ್ಯೋಗಾರ್ಹತೆಯನ್ನು ಹೆಚ್ಚಿಸಲು ಮತ್ತು ನೈತಿಕ ಶಿಕ್ಷಣ ನೀಡುವ ಮೂಲಕ ಉತ್ತಮ ನಾಗರೀಕರನ್ನು ನಿರ್ಮಾಣ ಮಾಡಲು, ಹಲವಾರು ಪ್ರಮುಖ ಗುರಿಗಳನ್ನು ಸಾಧಿಸಲು, ಶಾಲಾ ಮತ್ತು ಉನ್ನತ ಶಿಕ್ಷಣವನ್ನು ಜಾಗರೂಕತೆಯಿಂದ ಪರಿಶೀಲಿಸಿ, ಸೂಕ್ತ ಯೋಜನೆಗಳನ್ನು ಶಿಫಾರಸ್ಸು ಮಾಡಲು ಶ್ರೇಷ್ಠ ಶಿಕ್ಷಣ ತಜ್ಞರಾದ Prof. Sukhdev Thorat, an eminent Educationist, Indian Economist, Professor, Writer and Former Chairman of UGC, New-Delhi, ಇವರ ಅಧ್ಯಕ್ಷತೆಯಲ್ಲಿ 15 ಸದಸ್ಯರ ಹಾಗೂ 8 ಸಲಹೆಗಾರರನ್ನೊಳಗೊಂಡ ರಾಜ್ಯ ಶಿಕ್ಷಣ ಆಯೋಗವನ್ನು ಸರ್ಕಾರದ ಆದೇಶ ಸಂಖ್ಯೆ: ಇಡಿ 166 UNE 2023, ದಿನಾಂಕ: 11.10.2023ರನ್ವಯ ರಚಿಸಲಾಗಿದೆ. |
| ಆ) | ರಾಜ್ಯದಲ್ಲಿ ಹೊಸ ರಾಜ್ಯ ಶಿಕ್ಷಣ ನೀತಿಯನ್ನು ಶಾಲಾ ಶಿಕ್ಷಣ ಮತ್ತು ಉನ್ನತ ಶಿಕ್ಷಣದಲ್ಲಿ ತರಲು ಇಚ್ಛಿಸಲಾಗಿದೆಯೇ; ರಾಜ್ಯ ಶಿಕ್ಷಣ ನೀತಿಯನ್ನು ಜಾರಿಗೊಳಿಸಲು ರಾಜ್ಯ ಸರ್ಕಾರ ಮಾಡಿಕೊಂಡಿರುವ ಪೂರ್ವಭಾವಿ ಸಿದ್ಧತೆಗಳು ಯಾವುವು; (ಪೂರ್ಣ ಮಾಹಿತಿ ನೀಡುವುದು); | ರಾಜ್ಯ ಶಿಕ್ಷಣ ಆಯೋಗವು ದೇಶದಲ್ಲಿ ಇಲ್ಲಿಯವರೆಗೂ ರಚನೆಗೊಂಡು ಅನುಷ್ಠಾನಗೊಂಡಿರುವ ಎಲ್ಲಾ ಶಿಕ್ಷಣ ನೀತಿ ಆಯೋಗಗಳ ವರದಿಗಳನ್ನು ಪರಿಗಣಿಸಿ ರಾಜ್ಯದ ಸ್ಥಳೀಯ, ಭೌಗೋಳಿಕ, ಅಂತರಾಷ್ಟ್ರೀಯ, ಸಾಮಾಜಿಕ, ಆರ್ಥಿಕ, ಗ್ರಾಮೀಣ ಅವಶ್ಯಕತೆಗಳು ಇತ್ಯಾದಿ ಅಂಶಗಳನ್ನು ಪರಿಗಣಿಸಿ ರಾಜ್ಯಕ್ಕೆ ಅವಶ್ಯಕವಿರುವ ಶಿಕ್ಷಣ ನೀತಿಯನ್ನು ರಾಜ್ಯ ಶಿಕ್ಷಣ ಆಯೋಗವು ಶಿಫಾರಸ್ಸು ಮಾಡುತ್ತದೆ. |

| | | |
|---|---|---|
| | | ರಾಜ್ಯದಲ್ಲಿ ಈ ಹಿಂದಿನ ವರ್ಷಗಳಲ್ಲಿ ಅನುಷ್ಠಾನಗೊಳಿಸಿರುವ ಶಿಕ್ಷಣ ನೀತಿ ಹಾಗೂ ಪ್ರಸ್ತುತ ಸ್ಥಿತಿಗತಿಗಳ ಬಗ್ಗೆ ಅಧ್ಯಯನ ಮಾಡಲು ರಚಿಸಿರುವ ಕಾರ್ಯತಂಡವು ರಾಜ್ಯದ ನಾಲ್ಕು ಕಂದಾಯ ವಿಭಾಗಗಳಲ್ಲಿ ಉನ್ನತ ಶಿಕ್ಷಣ ಇಲಾಖೆ ವ್ಯಾಪ್ತಿಯ ವಿಶ್ವವಿದ್ಯಾಲಯಗಳು, ಕಾಲೇಜುಗಳು (ಸರ್ಕಾರಿ/ ಅನುದಾನಿತ/ಖಾಸಗಿ), ಎಲ್ಲಾ ಪಾಲುದಾರರು, ವಿಭಾಗಗಳಲ್ಲಿರುವ ವಿಶ್ರಾಂತ ಕುಲಪತಿಗಳು, ಪ್ರಾಧ್ಯಾಪಕರುಗಳು, ಶಿಕ್ಷಣ ತಜ್ಞರು, ಶಿಕ್ಷಕ ಸಂಘಟನೆಗಳು, ವಿದ್ಯಾರ್ಥಿ ಸಂಘಟನೆಗಳ ಜೊತೆಗೆ ಪರಸ್ಪರ ಸಮಾಲೋಚನಾ ಸಭೆಗಳನ್ನು ನಡೆಸಿ ಅಭಿಪ್ರಾಯ ಸಂಗ್ರಹ ಕಾರ್ಯವನ್ನು ಮಾಡಿ ವಸ್ತುಸ್ಥಿತಿ ವರದಿ ಸಲ್ಲಿಸಲು ನಿರ್ಣಯಿಸಿರುತ್ತದೆ. |
| ಇ) | ರಾಜ್ಯದಲ್ಲಿ ಉನ್ನತ ಶಿಕ್ಷಣ ಇಲಾಖೆಯಲ್ಲಿ ರಾಷ್ಟ್ರೀಯ ಶಿಕ್ಷಣ ನೀತಿ-2020 ಅನುಷ್ಠಾನ ಮುಂದುವರೆದ ಹಂತದಲ್ಲಿದ್ದು, (ಅಡ್ವಾನ್ಸ್ ಸ್ಟೇಜ್) ರಾಜ್ಯ ಸರ್ಕಾರದ ಈ ನಿರ್ಧಾರದಿಂದ, ಉನ್ನತ ವ್ಯಾಸಂಗ ಮಾಡುವ ವಿದ್ಯಾರ್ಥಿಗಳ ಮನದಲ್ಲಿ ಗೊಂದಲ, ಅಸ್ಥಿರತೆ ಉಂಟಾಗಿ ಅವರ ಮುಂದಿನ ವ್ಯಾಸಂಗಕ್ಕೆ ಧಕ್ಕೆ ಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಈ ಬಗ್ಗೆ ವಿದ್ಯಾರ್ಥಿಗಳ ಮುಂದಿನ ಭವಿಷ್ಯಕ್ಕೆ ರಾಜ್ಯ ಸರ್ಕಾರ ರೂಪಿಸಿರುವ ಪರ್ಯಾಯ ಮಾರ್ಗಗಳು ಯಾವುವು? (ಪೂರ್ಣ ವಿವರ ನೀಡುವುದು) | ಹಾಲಿ 2023-24ನೇ ಶೈಕ್ಷಣಿಕ ಸಾಲಿನಲ್ಲಿ ಕಳೆದ ಎರಡು ಶೈಕ್ಷಣಿಕ ವರ್ಷಗಳಿಂದ ಈಗಾಗಲೇ ಅಳಡಿಸಿಕೊಂಡಿದ್ದ ಪಠ್ಯಕ್ರಮಗಳನ್ನು ಮುಂದುವರೆಸಿದ್ದು, ಪ್ರಸ್ತುತ ವಿದ್ಯಾರ್ಥಿಗಳು ಸದರಿ ಪಠ್ಯಕ್ರಮಗಳನ್ನೇ ಅಭ್ಯಾಸ ಮಾಡುತ್ತಿರುವುದರಿಂದ ರಾಜ್ಯದ ವಿದ್ಯಾರ್ಥಿ ಸಮೂಹಕ್ಕೆ ಹಾಗೂ ಮುಂದಿನ ವ್ಯಾಸಂಗಕ್ಕೆ ಯಾವುದೇ ಅಡಚಣೆ/ತೊಂದರೆಯಾಗಿರುವುದಿಲ್ಲ. |

ಸಂಖ್ಯೆ: ಇಪಿ 373 ಪಿಜಿಸಿ 2023

**(ಎಸ್. ಮಧು ಬಂಗಾರಪ್ಪ)**
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು.